ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಮಿತಿ (ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿ)

ಪತ್ರಿಕೆಯ ಹೆಸರು : NAME OF THE NEWS PAPER : ಕನ್ನಡ ಪ್ರಭ

ದಿನಾಂಕ : DATE : 15/06/2019

# ದಲಿತ ಯುವಕನ ಮೇಲೆ ದೌರ್ಜನ್ಯ : ಸದನ ಸಮಿತಿ ಇಂದು ಗುಂಡ್ಲುಪೇಟೆಗೆ

ಮೈಸೂರು: ದಲಿತ ಯುವಕನ ಮೇಲಿನ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿ ಪರಿಶೀಲನೆ ನಡೆಸುವ ಸಲುವಾಗಿ ರಾಜ್ಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಸದನ ಸಮಿತಿಯು ಜೂ.15ರಂದು ಗುಂಡ್ಲುಪೇಟೆಗೆ ತೆರಳಲಿದೆ. ಶಾಸಕ ಎಚ್.ಕೆ. ಕುಮಾರಸ್ವಾಮಿ ನೇತೃತ್ವದ ಈ ಸಮಿತಿಯು ಶುಕ್ರವಾರ ಜಿಪಂ ಸಭಾಂಗಣದಲ್ಲಿ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ ಈ ಮಾಹಿತಿ ನೀಡಿತು. ಸಿಆರ್‌ಇ ಸೆಲ್‌ನ ಡಿವೈಎಸ್ಪಿ ಹಂತದ ಅಧಿಕಾರಿಗಳು ಗ್ರಾಮಕ್ಕೆ ತೆರಳಿ ಪರಿಶೀಲಿಸಿಲ್ಲ. ಯಾರೋ ಇನ್‌ಸ್ಪೆಕ್ಟರ್ ಒಬ್ಬರನ್ನು ಕಳುಹಿಸಿ ಸುಮ್ಮನೆ ಕೂರುವುದು ಸರಿಯಲ್ಲ ಎಂದು ಎಚ್.ಕೆ.ಕುಮಾರಸ್ವಾಮಿ ತಿಳಿಸಿದರು. ಸಮಿತಿಯಲ್ಲಿ ಅಧ್ಯಕ್ಷ ಎಚ್.ಕೆ. ಕುಮಾರಸ್ವಾಮಿ, ಸದಸ್ಯರಾದ ಎನ್. ಮಹೇಶ್, ಪ್ರಸನ್ನಕುಮಾರ್, ಅನಿಲ್‌ಕುಮಾರ್, ಅನ್ನದಾನಿ, ಕೆ. ಮಹದೇವ್, ಅಶ್ವಿನ್‌ಕುಮಾರ್ ಇದ್ದಾರೆ.

**ಇಬ್ಬರು ಪೊಲೀಸರ ಅಮಾನತು:** ಗುಂಡ್ಲುಪೇಟೆ ತಾಲೂಕಿನ ಕಬ್ಬೇಕಟ್ಟೆ ಶನೈಶ್ಚರ ದೇವಸ್ಥಾನದಲ್ಲಿ ನಡೆದ ದಲಿತ ಯುವಕನ ಮೇಲಿನ ದೌರ್ಜನ್ಯ ಪ್ರಕರಣಕ್ಕೆ ಸಂಬಂಧಿಸಿ ಎಎಸ್‌ಐ ಸಿ.ರಾಜೇಂದ್ರಪ್ರಸಾದ್, ಹೈವೇ ಗಸ್ತು ವಾಹನ ಚಾಲಕ ಶ್ರೀನಿವಾಸ ಅವರನ್ನು ಸೇವೆಯಿಂದ ಅಮಾನತು ಮಾಡಲಾಗಿದೆ.